ಅಕ್ಷರ ದಾಸೋಹ

784 (1191) ಶ್ರೀ ಪಾಟೀಲ್ ವಿ.ಎಸ್. (ಯಲ್ಲಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಸ್ತುತ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಿಗೆ ಇರುವ ಅಕ್ಷರ ದಾಸೋಹ ಅಡುಗೆ ಕೋಣೆಗಳ ಸಂಖ್ಯೆ ಎಷ್ಟು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರಸ್ತುತ ರಾಜ್ಯದಲ್ಲಿ 39047 ಅಡುಗೆ ಕೋಣೆಗಳಿವೆ.

ಅನಧಿಕೃತ ಮದ್ಯ ಮಾರಾಟ ಕುರಿತು

787 (571) ಶ್ರೀ ಪಾಟೀಲ್ ಎ.ಎಸ್. (ನಡಹಳ್ಳಿ) (ದೇವರ ಹಿಪ್ಪರಗಿ) : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವರಹಿಪ್ಪರಗಿ ಕ್ಷೇತ್ರ ವ್ಯಾಪ್ತಿಯಲ್ಲಿ ಮದ್ಯ ಮಾರಾಟಕ್ಕೆ ಪರವಾನಗಿ ಪಡೆದಿರುವವರ ಸಂಖ್ಯೆ ಎಷ್ಟು;

ಆ) ಪರವಾನಗಿದಾರರ ಹೆಸರು, ವಿಳಾಸ ಗ್ರಾಮವಾರು ವಿವರ ನೀಡುವುದು;

ಇ) ದೇವರ ಹಿಪ್ಪರಗಿ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಅನಧಿಕೃತವಾಗಿ ಬಹಿರಂಗವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಅನಧಿಕೃತವಾಗಿ ಆಯಾ ಗ್ರಾಮಗಳಲ್ಲಿ ಮದ್ಯ ಮಾರಾಟ ಮಾಡುತ್ತಿರುವವರ ವಿರುದ್ಧ ಕೈಗೊಂಡ ಕ್ರಮವೇನು;

ಉ) ಕಳೆದ 2 ವರ್ಷಗಳಲ್ಲಿ ಕ್ಷೇತ್ರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಮದ್ಯ ಮಾರಾಟ ಮಾಡುತ್ತಿರುವವರ ವಿರುದ್ಧ ಎಷ್ಟು ಕೇಸು ದಾಖಲಿಸಲಾಗಿವೆ?

ಶ್ರೀ ಎಂ.ಪಿ.ರೇಣುಕಾಚಾರ್ಯ (ಅಬಕಾರಿ ಸಚಿವರು) :

ಅ) ದೇವರಹಿಪ್ಪರಗಿ ಕ್ಷೇತ್ರ ವ್ಯಾಪ್ತಿಯಲ್ಲಿ ಮದ್ಯ ಮಾರಾಟಕ್ಕೆ 05 ಜನರಿಗೆ ಸಿಎಲ್ –2 ಸನ್ನದು ಪರವಾನಗಿ ನೀಡಲಾಗಿರುತ್ತದೆ.